ಅನುಬಂಧ – III

566(883) ಶ್ರೀ ಅಂಜನಾಮೂರ್ತಿ (ನೆಲಮಂಗಲ) ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರವು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಾಯ್ದೆ 1996ರ ಪ್ರಕಾರ ಕಾರ್ಮಿಕರ ಕಲ್ಯಾಣ ಶುಲ್ಕ ಕಾಯ್ದೆಯನ್ನು ಅನುಷ್ಠಾನ ಗೊಳಿಸಿದೆಯೇ?

ಆ) ಎಲ್ಲಾ ಕಟ್ಟಡಗಳು ಹಾಗೂ ಇತರೇ ನಿರ್ಮಾಣಗಳ ಮೇಲೆ ಶೇಕಡಾ 1ರಷ್ಟು ಲೇವಿಯನ್ನು ವಿಧಿಸಲು ಅವಕಾಶ ಕಲ್ಪಿಸಲಾಗಿದೆಯೇ?

ಇ) ಈ ರೀತಿಯಲ್ಲಿ ಬರುವ ಹಣವನ್ನು ಕಾರ್ಮಿಕರ ಕಲ್ಯಾಣ ನಿಧಿಗೆ ಸೇರಿಸಿದೆಯೇ ಅಥವಾ ಇಲ್ಲವೇ?

ಈ) ಹಾಗಿದ್ದಲ್ಲಿ, ಸೇರಿದ ಮೊಬಲಗು ಎಷ್ಟು ಹಾಗೂ ಫಲಾನುಭವಿಗಳ ಸಂಖ್ಯೆ ಎಷ್ಟು?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವರು):

ಅ) ಹೌದು

ಆ) ಹೌದು

ಇ) ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯನ್ನು ರಚಿಸಲಾಗಿದೆ ಈ ಮಂಡಳಿಯು ಸಭೆ ಆದಷ್ಟು ಬೇಗ ಸೇರಿ, ಶೇ 1ರಷ್ಟು ಸೆಸ್‌ನ್ನು ಸಂಗ್ರಹಣೆ ಮಾಡುವ ಬಗ್ಗೆ ಮಾರ್ಗಸೂಚಿಗಳನ್ನು ಅಂತಿಮಗೊಳಿಸಲಾಗುವುದು

ಈ) ಉದ್ಭವಿಸುವುದಿಲ್ಲ

567(969) ಶ್ರೀ ಅಂಜನಾಮೂರ್ತಿ (ನೆಲಮಂಗಲ) ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ (ಐ ಟಿ ಐ) ಶಿಕ್ಷಣ ಅಪೇಕ್ಷಿಸುವ ಸಮಾಜದ ದುರ್ಬಲ ವರ್ಗದ ವಿದ್ಯಾರ್ಥಿಗಳಿಗೆ ಉಪಯೋಗವಾಗುವಂತಹ ಉಪಕರಣಗಳನ್ನು ಖರೀದಿಸಲು ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು?

ಆ) ರಾಜ್ಯದಲ್ಲಿ ಸರ್ಕಾರಕ್ಕೆ ಸೇರಿದ ಐ ಟಿ ಐ ಶಿಕ್ಷಣ ಸಂಸ್ಥೆಗಳು ಎಷ್ಟು?

ಇ) ಹಾಗಿದ್ದಲ್ಲಿ, ಇರುವ ಐ ಟಿ ಐ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು?

ಈ) ರಾಜ್ಯದಲ್ಲಿ ಹೊಸ ಐ ಟಿ ಐ ಶಿಕ್ಷಣ ಸಂಸ್ಥೆಗಳನ್ನು ಮಂಜೂರು ಮಾಡಲಾಗಿರುವ ಜಿಲ್ಲೆಗಳಾವುವು ಹಾಗೂ ಎಷ್ಟು?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವರು)

ಅ) ರೂ 102 79 ಲಕ್ಷಗಳು

ಆ) 11

ಇ) ರೂ 420 ಲಕ್ಷಗಳು

ಈ) 1) ಆಲೂರು ಸಿದ್ದಾಪುರ, ಕೊಡಗು ಜಿಲ್ಲೆ
2) ಕೆ ಆರ್ ಪೇಟೆ, ಮಂಡ್ಯ ಜಿಲ್ಲೆ
3) ರಾಮನಗರ, ಬೆಂಗಳೂರು ಗ್ರಾಮಾಂತರ ಜಿಲ್ಲೆ
4) ಪಡುವಲ ಹಿಪ್ಪ, ಹೊಳೇನರಸೀಪುರ, ಹಾಸನ ಜಿಲ್ಲೆ
5) ಮುಂಡಗೋಡು, ಉತ್ತರ ಕನ್ನಡ ಜಿಲ್ಲೆ
6) ಗಂಗಾವತಿ, ಕೊಪ್ಪಳ ಜಿಲ್ಲೆ
7) ಶಿಕಾರಿಪುರ, ಶಿವಮೊಗ್ಗ ಜಿಲ್ಲೆ

568(1066) ಶ್ರೀ ಅಂಜನಾಮೂರ್ತಿ (ನೆಲಮಂಗಲ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಅಭಿವೃದ್ಧಿಗಾಗಿ ಒದಗಿಸಲಾದ ಹಣದಲ್ಲಿ ಇನ್ನೂ ಹೆಚ್ಚಿನ ಭಾಗ ಬಳಕೆಯಾಗದೆ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ಬಳಕೆಯಾಗದೆ ಉಳಿದ ಹಣದ ಮಾಹಿತಿ ಒದಗಿಸುವುದು)?

2) ಹಾಗಿದ್ದಲ್ಲಿ ಈ ಬಗ್ಗೆ ನಿರ್ಲಕ್ಷ ತೋರಿಸುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

1) ಅಭಿವೃದ್ಧಿಗಾಗಿ ಬಿಡುಗಡೆ ಮಾಡಿದ ಹಾಗೂ ಖರ್ಚಾದ ಹಣದ ವಿವರಗಳು ಕೆಳಕಂಡಂತಿವೆ